# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ ಸದಸ್ಯರ ಹೆಸರು : | ಮಾನ್ಯ ಶ್ರೀ ಕೆ ವಿ ನಾರಾಯಣಸ್ವಾಮಿ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 670 |
| ಉತ್ತರಿಸಬೇಕಾದ ದಿನಾಂಕ : | 14-12-2018 |
| ಉತ್ತರಿಸುವ ಸಚಿವರು | ಮಾನ್ಯ ನಗರಾಭಿವೃದ್ಧಿ ಮತ್ತು ವಸತಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಭಾಗದ ತಾಲ್ಲೂಕು ಮಟ್ಟದಲ್ಲಿ ವಸತಿ ಇಲಾಖೆಯ ಮೇಲ್ವಿಚಾರಕರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತವು ಬೆಂಗಳೂರಿನಲ್ಲಿ ಮಾತ್ರ ಕೇಂದ್ರ ಕಛೇರಿ ಹೊಂದಿರುತ್ತದೆ. ಜಿಲ್ಲಾ /ತಾಲ್ಲೂಕು ಮಟ್ಟದಲ್ಲಿ ಯಾವುದೇ ಕಛೇರಿಯನ್ನು ಹೊಂದಿರುವುದಿಲ್ಲ. ಸರ್ಕಾರದ ಆದೇಶ ಸಂಖ್ಯೆ: ವಇ 11 ಹೆಚ್ಎಎಂ 2017, ಬೆಂಗಳೂರು ದಿನಾಂಕ: 05.06.2017ರಲ್ಲಿ ವಸತಿ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ವಸತಿ ಯೋಜನೆಗಳನ್ನು ತ್ವರಿತಗತಿಯಲ್ಲಿ ಅನುಷ್ಠಾನಗೊಳಿಸುವುದಕ್ಕಾಗಿ ಜಿಲ್ಲಾ ಮಟ್ಟದಲ್ಲಿ ಮತ್ತು ಕೆಳಹಂತದಲ್ಲಿ ಪೂರ್ಣ ಪ್ರಮಾಣದ ಕಾರ್ಯ ನಿರ್ವಹಿಸಲು ಅವಶ್ಯವಿರುವ 857 ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಎರಡು ವರ್ಷಗಳ ಅವಧಿಗೆ ಮಾತ್ರ ಮಾನವ ಸಂಪನ್ಮೂಲ ಏಜೆನ್ಸಿ ಮೂಲಕ ತಾತ್ಕಾಲಿಕವಾಗಿ ಕೆ.ಟಿ.ಪಿ.ಪಿ ಕಾಯ್ದೆ/ನಿಯಮಗಳನ್ವಯ ನೇಮಕ ಮಾಡಿಕೊಳ್ಳಲು ಸರ್ಕಾರವು ಆದೇಶ ಹೊರಡಿಸಿರುತ್ತದೆ.<br><br>ಸದರಿ 857 ಹುದ್ದೆಗಳನ್ನು ಭರ್ತಿ ಮಾಡಲು ನಿಗಮದಿಂದ ಟೆಂಡರ್ ಆಹ್ವಾನಿಸಲಾಗಿದ್ದು, ಸದರಿ ಟೆಂಡರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚನ್ಯಾಯಾಲಯದಲ್ಲಿ ರಿಟ್ ಅರ್ಜಿ ದಾಖಲಾಗಿದೆ ಮತ್ತು ಮಧ್ಯಂತರ ತಡೆಯಾಜ್ಞೆ ಇರುತ್ತದೆ. ಇದನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ತಾಲ್ಲೂಕು ಮಟ್ಟದಲ್ಲಿ ಮೇಲ್ವಿಚಾರಣೆ ಉತ್ತಮ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು: | |
| ಇ) | ವಸತಿ ಇಲಾಖೆಯ ಸಮರ್ಪಕ ಮೇಲ್ವಿಚಾರಣೆಗಾಗಿ ತಾಲ್ಲೂಕು ಮಟ್ಟದಲ್ಲಿ ಸಹಾಯಕ ನಿರ್ದೇಶಕರು, ಗ್ರಾಮೀಣ ವಸತಿ, ಎಂಬ ಹುದ್ದೆಯನ್ನು ಸೃಜಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; | ಈ ಬಗ್ಗೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಈ) | ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸೃಜಿಸಲಾಗುವುದು? | ಅನ್ವಯಿಸುವುದಿಲ್ಲ |

ಕಡತ ಸಂಖ್ಯೆ: ವಇ 263 ಹೆಚ್ಎಎಂ 2018

(ಯು ಟಿ ಖಾದರ್)
ನಗರಾಭಿವೃದ್ಧಿ ಮತ್ತು ವಸತಿ ಸಚಿವರು